789 ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ವೈದ್ಯನಾಥಪುರ ಆಲೂರು ಸೇತುವೆಯು ಸಂಪೂರ್ಣ ಶಿಥಿಲಗೊಂಡಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಸೇತುವೆಯ ಪುನರ್ ನಿರ್ಮಾಣಕ್ಕಾಗಿ ಸರಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ಸೇತುವೆಯ ನಿರ್ಮಾಣಕ್ಕಾಗಿ ಸರಕಾರ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು;

ಈ) ಈ ಸೇತುವೆಯ ಮರು ನಿರ್ಮಾಣ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಉ) ಸೇತುವೆಯ ಶಿಥಿಲಗೊಂಡಿರುವುದರಿಂದ ಆ ಭಾಗದ ರೈತರಿಗೆ ತೊಂದರೆಯಾಗಿರುವುದು ನಿಜವೇ;

ಊ) ಹಾಗಿದ್ದಲ್ಲಿ, ತೊಂದರೆಯನ್ನು ನಿವಾರಿಸಲು ಸರಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸರಕಾರದ ಗಮನಕ್ಕೆ ಬಂದಿರುತ್ತದೆ.

ಆ) ಈ ಕಾಮಗಾರಿಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಎರಡನೇ ಹಂತದ ಸೇತುವೆಯ ನಿರ್ಮಾಣ ಯೋಜನೆಯಲ್ಲಿ 1.25 ಕೋಟಿ ರೂ.ಗಳ ಮೊತ್ತದಲ್ಲಿ ತೆಗೆದುಕೊಳ್ಳಲು ಸರ್ಕಾರ ಆದೇಶಿಸಿತ್ತು. ಈ ಕಾಮಗಾರಿಯನ್ನು ಎರಡನೇ ಹಂತದ 4ನೇ ಪ್ಯಾಕೇಜಿನಲ್ಲಿ ಮೆ:ಗ್ಯಾಮನ್ ಇಂಡಿಯಾ ಲಿ.ರವರಿಗೆ ವಹಿಸಲಾಗಿತ್ತು. ಸರ್ವೆ ಮಾಡಿ ಅಂದಾಜು ಪಟ್ಟಿಯನ್ನು ತಯಾರಿಸಿದಾಗ, ಸೇತುವೆಯ ನಿರ್ಮಾಣಕ್ಕೆ 10 ಕೋಟಿ ರೂ.ಗಳು ಬೇಕಾಗುವುದೆಂದು ಕಂಡುಬಂದಿದ್ದರಿಂದ ಮತ್ತು ನಿಗಮದಲ್ಲಿ ಅನುದಾನದ ಲಭ್ಯತೆ ಇಲ್ಲದಿದ್ದರಿಂದ ದಿನಾಂಕ: 28-07-2008 ರಂದು ನಡೆದ 71ನೇ ಮಂಡಳಿ ಸಭೆಯ ನಿರ್ಣಯದಂತೆ ಸೇತುವೆ ಕಾಮಗಾರಿಯನ್ನು ಪ್ರಸ್ತುತ ಕೈಬಿಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಅನುದಾನದ ಲಭ್ಯತೆ ಮೇರೆಗೆ ಕಾಮಗಾರಿಯನ್ನು ತೆಗೆದುಕೊಳ್ಳಲಾಗುವುದು.

ಉ) ಹೌದು.

ಊ) ಅನುದಾನದ ಲಭ್ಯತೆ ಮೇರೆಗೆ ಕಾಮಗಾರಿಯನ್ನು ತೆಗೆದುಕೊಳ್ಳಲಾಗುವುದು.

826 ಶ್ರೀ ಶ್ರೀನಿವಾಸ್. ಎಂ (ಮಂಡ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ತಾಲ್ಲೂಕು ಕೌಡ್ಲೆಯಿಂದ ಮಂಡ್ಯ ನಗರಕ್ಕೆ ಜಿಲ್ಲಾ ಮುಖ್ಯ ರಸ್ತೆಯನ್ನು ಉನ್ನತೀಕರಿಸಿ ಕೆ.ಶಿಪ್ (1) ರಲ್ಲಿ ವಿಶ್ವಬ್ಯಾಂಕ್ ನೆರವಿನಿಂದ ಕಾಮಗಾರಿ ಕೈಗೆತ್ತಿಕೊಳ್ಳಲು ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು;

ಆ) ಈ ರಸ್ತೆ ಕಾಮಗಾರಿಯನ್ನು ಪ್ರಾರಂಭಿಸಲು ಸರ್ವೆ ಕಾರ್ಯವು ಮುಗಿದಿದೆಯೇ;

ಇ) ಹಾಗಿದ್ದಲ್ಲಿ, ರಸ್ತೆಯ ಕಾಮಗಾರಿಯನ್ನು ಪ್ರಾರಂಭಿಸದಿರಲು ಸರ್ಕಾರಕ್ಕಿರುವ ತೊಂದರೆಗಳೇನು;

ಈ) ಈ ರಸ್ತೆ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಉ) ಈ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

ಊ) ಹಾಗಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು (ವಿವರಗಳನ್ನು ನೀಡುವುದು)?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಕೌಡ್ಲೆಯಿಂದ–ಮಂಡ್ಯವರೆಗಿನ ರಸ್ತೆಯ ಅಭಿವೃದ್ಧಿಯು ಕೆಶಿಪ್ (2) ಯೋಜನೆಯಡಿಯಲ್ಲಿ 3411 ಕಿಮೀ. ಪಟ್ಟಿಯಲ್ಲಿ ಸೇರಿದ್ದು, ವಿಶ್ವಬ್ಯಾಂಕ್ ನೆರವಿನಲ್ಲಿ ಕೈಗೊಳ್ಳಲಾಗುವ ಹಂತ–1 ರಲ್ಲಿನ ಪಟ್ಟಿಯಲ್ಲಿ ಸೇರಿರುವುದಿಲ್ಲ. ವಿಶ್ವಬ್ಯಾಂಕ್‌ನಿಂದ ಯೋಜನೆಗೆ ಇನ್ನೂ ಯಾವುದೇ ಆರ್ಥಿಕ ನೆರವು ಬಿಡುಗಡೆಯಾಗಿರುವುದಿಲ್ಲ.